**Akashvani : Bangalore**
**Regional Bulletin In Kannada**
**15.03.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಅನಿಲ ಕೊರತೆ ನೀಗಿಸಲು ಕ್ರಮಕೈಗೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯಸಭಾ ಚುನಾವಣೆ ; ಬಿಡದಿ ಪೊಲೀಸರಿಂದ ಕಾಂಗ್ರೆಸ್ ಶಾಸಕರಿಗೆ ಆಮಿಷ ಒಡ್ಡಲು ಯತ್ನಿಸಿದ ಇಬ್ಬರ ವಶ

೩. ರಾಜ್ಯದ ೨ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಾಗಿ ವೇಳಾಪಟ್ಟಿ ಪ್ರಕಟ ; ಏಪ್ರಿಲ್ ೯ ರಂದು ಮತದಾನ ; ಮೇ ೫ರಂದು ಮತ ಎಣಿಕೆ

೪. ಫಾಸ್ಟ್ಯಾಗ್ ವಾರ್ಷಿಕ ಪಾಸ್ ದರ ೩ ಸಾವಿರದ ೭೫ ರೂಪಾಯಿಗೆ ಏರಿಕೆ ; ಏಪ್ರಿಲ್ ೧ ರಿಂದ ಜಾರಿ

***************

ರಾಜ್ಯದಲ್ಲಿ ಎದುರಾಗಿರುವ ಅನಿಲ ಕೊರತೆಯನ್ನು ನೀಗಿಸಲು ವಿದೇಶಗಳಿಂದ ಪೂರೈಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನಿಲ ಅಭಾವದ ಪರಿಸ್ಥಿತಿಯನ್ನು ಎದುರಿಸಲು ಸರ್ಕಾರ ಗಂಭೀರ ಕ್ರಮ ಕೈಗೊಳ್ಳುತ್ತಿದ್ದು, ಈ ಕುರಿತು ವಿಧಾನಮಂಡಲದಲ್ಲಿ ಈಗಾಗಲೇ ಉತ್ತರಿಸಲಾಗಿದೆ. ವಿಶೇಷವಾಗಿ ಹೋಟೆಲ್ ಉದ್ಯಮದ ಮೇಲೆ ಅವಲಂಬಿತರಾಗಿರುವವರ ಜೀವನೋಪಾಯಕ್ಕೆ ತೊಂದರೆ ಯಾಗದಂತೆ ನೋಡಿಕೊಳ್ಳುವುದು ಸರ್ಕಾರದ ಆದ್ಯತೆಯಾಗಿದೆ. ಕೇಂದ್ರ ನೈಸರ್ಗಿಕ ಅನಿಲ ಸಚಿವರು ಸಮಸ್ಯೆ ಸರಿಪಡಿಸುವ ಭರವಸೆ ನೀಡಿರುವುದಾಗಿ ಮುಖ್ಯಮಂತ್ರಿ ತಿಳಿಸಿದ್ದಾರೆ.

ಇದಕ್ಕೂ ಮುನ್ನ ಇಂದಿರಾ ಲಂಕೇಶ್ ಪ್ರಕಾಶನ ಕೊಂಡಜ್ಜಿ ಬಸಪ್ಪ ಸಭಾ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಹಿತಿ ಹಾಗೂ ಪತ್ರಿಕೋದ್ಯಮಿ ದಿವಂಗತ ಪಿ.ಲಂಕೇಶ್ ಅವರ ಟೀಕೆ ಟಿಪ್ಪಣಿ ೩ ಭಾಗಗಳ ಪುಸ್ತಕ ಹಾಗೂ 'ಲಂಕೇಶ್‌ರ ಕಥೆಗಳು' ಎಂಬ ಆಡಿಯೊ ಬುಕ್ ಬಿಡುಗಡೆ ಮಾಡಿದರು.

***************

ಕರ್ನಾಟಕ ಸೇರಿದಂತೆ ಗೋವಾ, ಗುಜರಾತ್, ಮಹಾರಾಷ್ಟ್ರ, ನಾಗಾಲ್ಯಾಂಡ್ ಮತ್ತು ತ್ರಿಪುರಾದ ಒಟ್ಟು ೮ ವಿಧಾನಸಭಾ ಕ್ಷೇತ್ರಗಳಿಗೆ ಇಂದು ಉಪಚುನಾವಣೆಯ ವೇಳಾಪಟ್ಟಿ ಪ್ರಕಟಿಸಲಾಗಿದೆ.

ಈ ಕುರಿತು ನವದೆಹಲಿಯಲ್ಲಿಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್‌ಕುಮಾರ್ ಸುದ್ದಿಗೋಷ್ಠಿಯ ಮೂಲಕ ಮಾಹಿತಿ ನೀಡಿದ್ದಾರೆ.

ಕರ್ನಾಟಕದಲ್ಲಿ ಮಾಜಿ ಶಾಸಕ ಮೇಟಿ ಹುಲ್ಲಪ್ಪ ಯಮನಪ್ಪ ಅವರ ನಿಧನದಿಂದ ತೆರವಾಗಿದ್ದ ಬಾಗಲಕೋಟೆ ಕ್ಷೇತ್ರ ಹಾಗೂ ಮಾಜಿ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರಕ್ಕೆ ಉಪ ಚುನಾವಣೆಗೆ ವೇಳಾಪಟ್ಟಿ ಪ್ರಕಟಿಸಲಾಗಿದ್ದು, ನಾಳೆ ಗೆಜೆಟ್ ಅಧಿಸೂಚನೆ ಹೊರಡಿಸಲಾಗುವುದು.

ಇದೇ ೨೩ರವರೆಗೆ ಅಭ್ಯರ್ಥಿಗಳು ನಾಮಪತ್ರಗಳನ್ನು ಸಲ್ಲಿಸುವ ಅವಕಾಶ ಹೊಂದಿದ್ದು, ಇದೇ ೨೪ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಇದೇ ೨೬ರೊಳಗೆ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದಾಗಿದೆ. ಏಪ್ರಿಲ್ ೯ ರಂದು ಮತದಾನ ನಡೆಯಲಿದ್ದು, ಮೇ ೪ರಂದು ಮತ ಎಣಿಕೆ ನಡೆಯಲಿದೆ.

***************

ರಾಜ್ಯ ಸಭಾ ಚುನಾವಣೆ ಸಮೀಪಿಸುತ್ತಿರುವ ಬೆನ್ನಲ್ಲೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಬಿಡದಿ ಸಮೀಪದ ರೆಸಾರ್ಟ್‌ನಲ್ಲಿ ತಂಗಿರುವ ಒಡಿಶಾ ಕಾಂಗ್ರೆಸ್ ಶಾಸಕರಿಗೆ ಆಮಿಷ ಒಡ್ಡಲು ಯತ್ನಿಸಿದ ಇಬ್ಬರು ವ್ಯಕ್ತಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ನಾಳೆ ನಡೆಯಲಿರುವ ರಾಜ್ಯಸಭಾ ಚುನಾವಣೆ ಹಿನ್ನೆಲೆಯಲ್ಲಿ ಪಕ್ಷಾಂತರ ಅಥವಾ ಅಡ್ಡ ಮತದಾನದ ಭೀತಿಯಿಂದ ಒಡಿಶಾದ ೮ ಕಾಂಗ್ರೆಸ್ ಶಾಸಕರು ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿದ್ದಾರೆ. ಈ ವೇಳೆ ಶಾಸಕರನ್ನು ಸಂಪರ್ಕಿಸಿ ಮತದಾನದ ಮೇಲೆ ಪ್ರಭಾವ ಬೀರಲು ಒಡಿಶಾದಿಂದ ಬಂದಿದ್ದರೆನ್ನಲಾದ ನಾಲ್ವರು ವ್ಯಕ್ತಿಗಳ ತಂಡವೊಂದು ಶಾಸಕರಿಗೆ ಕೋಟ್ಯಂತರ ರೂಪಾಯಿ ಹಣದ ಆಮಿಷ ಒಡ್ಡಿದ್ದಲ್ಲದೇ ಖಾಲಿ ಚೆಕ್ ನೀಡಲು ಮುಂದಾಗಿದ್ದಾರೆ ಎಂದು ಕಾಂಗ್ರೆಸ್ ನಾಯಕರು ದೂರಿದ್ದಾರೆ.

ಈ ಕುರಿತು ಒಡಿಶಾ ಕಾಂಗ್ರೆಸ್ ಶಾಸಕಾಂಗ ಪಕ್ಷದ ಉಪನಾಯಕ ಅಶೋಕ ಕುಮಾರ್ ದಾಸ್ ಬಿಡದಿ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಶಾಸಕರು ಆಮಿಷವನ್ನು ತಿರಸ್ಕರಿಸಿದಾಗ ಆರೋಪಿಗಳು ಅವಾಚ್ಯ ಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಪ್ರಕರಣದ ಕುರಿತು ಪ್ರತಿಕ್ರಿಯಿಸಿರುವ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಶ್ರೀನಿವಾಸ ಗೌಡ, ಶಾಸಕರಿಂದ ಬಂದಿರುವ ದೂರಿನ ಪ್ರಾಥಮಿಕ ಪರಿಶೀಲನೆ ನಡೆಯುತ್ತಿದ್ದು, ಈಗಾಗಲೇ ಇಬ್ಬರನ್ನು ವಶಕ್ಕೆ ಪಡೆಯಲಾಗಿದೆ ಎಂದು ಖಚಿತಪಡಿಸಿದ್ದಾರೆ. ಶೀಘ್ರದಲ್ಲೇ ಈ ದೂರನ್ನು ಎಫ್‌ಐಆರ್ ಆಗಿ ಪರಿವರ್ತಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ.

***************

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ-ಎನ್‌ಎಚ್‌ಎಐ ೨೦೨೬-೨೭ನೇ ಹಣಕಾಸು ವರ್ಷಕ್ಕೆ ಅನ್ವಯವಾಗುವಂತೆ ಫಾಸ್ಟ್ಯಾಗ್ ವಾರ್ಷಿಕ ಪಾಸ್ ದರವನ್ನು ೩ ಸಾವಿರ ರೂಪಾಯಿಗಳಿಂದ ೩ ಸಾವಿರದ ೭೫ ರೂಪಾಯಿಗಳಿಗೆ ಪರಿಷ್ಕರಿಸಿದೆ.

ರಾಷ್ಟ್ರೀಯ ಹೆದ್ದಾರಿಗಳ ಶುಲ್ಕ ನಿಯಮಗಳು, ೨೦೦೮ರ ಅನ್ವಯ ಈ ಬದಲಾವಣೆ ಮಾಡಲಾಗಿದ್ದು, ಹೊಸ ದರ ಏಪ್ರಿಲ್ ೧ ರಿಂದ ಜಾರಿಗೆ ಬರಲಿದೆ. ದೇಶಾದ್ಯಂತ ಇರುವ ಸುಮಾರು ೧ ಸಾವಿರ ೧೫೦ ಟೋಲ್ ಪ್ಲಾಜಾಗಳಲ್ಲಿ ಈ ಸೌಲಭ್ಯ ಲಭ್ಯವಿದೆ.

ಈ ವಾರ್ಷಿಕ ಪಾಸ್ ವ್ಯವಸ್ಥೆಯು ಒಂದು ವರ್ಷದ ಅವಧಿಗೆ ಅಥವಾ ೨೦೦ ಬಾರಿ ಟೋಲ್ ದಾಟುವವರೆಗೆ ಮಾನ್ಯತೆ ಹೊಂದಿರುತ್ತದೆ. ಆಸಕ್ತರು ರಾಜ್‌ಮಾರ್ಗ್ ಯಾತ್ರಾ ಆಪ್ ಅಥವಾ ಪ್ರಾಧಿಕಾರದ ಅಧಿಕೃತ ಜಾಲತಾಣದ ಮೂಲಕ ಶುಲ್ಕ ಪಾವತಿಸಿ ಕೇವಲ ೨ ಗಂಟೆಗಳಲ್ಲಿ ಈ ಸೌಲಭ್ಯ ಸಕ್ರಿಯಗೊಳಿಸಿಕೊಳ್ಳಬಹುದಾಗಿದೆ.

೨೦೨೫ ಆಗಸ್ಟ್ ೧೫ರಂದು ಆರಂಭವಾದ ಈ ಸೌಲಭ್ಯ ರಾಷ್ಟ್ರೀಯ ಹೆದ್ದಾರಿ ಬಳಕೆದಾರರಿಗೆ ಅತ್ಯಂತ ಸುಗಮ ಆಯ್ಕೆಯಾಗಿದ್ದು, ಸುಮಾರು ೫೬ ಲಕ್ಷಕ್ಕೂ ಅಧಿಕ ಬಳಕೆದಾರರು ಇದರ ಪ್ರಯೋಜನ ಪಡೆಯುತ್ತಿದ್ದಾರೆ.

***************

ಮಂಡ್ಯ ಜಿಲ್ಲೆಯ ವಿ.ಸಿ.ನಾಲೆ ಅಭಿವೃದ್ಧಿಗೆ ಮೊನ್ನೆ ನಡೆದ ಸಚಿವ ಸಂಪುಟ ಸಭೆಯಲ್ಲಿ ನೂರು ಕೋಟಿ ಬಿಡುಗಡೆ ಮಾಡಲು ಸಮ್ಮತಿ ಸೂಚಿಸಲಾಗಿದ್ದು, ಜಲಸಂಪನ್ಮೂಲ ಇಲಾಖೆಯಿಂದ ಕಾವೇರಿ ಶಾಖಾ ನಾಲೆಗಾಗಿ ಈ ಹಣ ಬಿಡುಗಡೆಯಾಗಲಿದೆ ಎಂದು ಶಾಸಕ ರವಿಕುಮಾರ್ ಗಣಿಗ ತಿಳಿಸಿದ್ದಾರೆ.

ಮಂಡ್ಯ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಶೀಘ್ರದಲ್ಲೇ ಟೆಂಡರ್ ಕರೆದು ನಾಲಾ ಅಭಿವೃದ್ಧಿ ಮಾಡಲಾಗುವುದು.

ಕಳೆದ ಎರಡೂವರೆ ವರ್ಷದಲ್ಲಿ ನೂರು ಕೋಟಿ ಹಣವನ್ನು ನಾಲಾ ಅಭಿವೃದ್ಧಿ ಕಾಮಗಾರಿಗೆ ವ್ಯಯಮಾಡಲಾಗಿದೆ. ಇನ್ನು ನೂರು ಕೋಟಿ ಹಣವು ನಾಲಾ ಅಭಿವೃದ್ಧಿಗಾಗಿ ಹಂತ ಹಂತವಾಗಿ ಬಿಡುಗಡೆಯಾಗಲಿದ್ದು, ಇದಕ್ಕೆ ಬೇಡಿಕೆ ಸಲ್ಲಿಸಲಾಗಿದೆ. ಜೊತೆಗೆ ಬಸರಾಳು ಭಾಗದ ಹೇಮಾವತಿ ನಾಲೆ ಅಭಿವೃದ್ಧಿಗೆ ಡಿಪಿಆರ್ ಆಗಿದೆ. ೩೫೦ ಕೋಟಿ ವೆಚ್ಚದಲ್ಲಿ ಬಸರಾಳು ಭಾಗದ ನಾಲಾ ಅಭಿವೃದ್ಧಿ ಕಾಮಗಾರಿ ಆಗಲಿದೆ ಎಂದು ಹೇಳಿದರು.

***************

ಪ್ರಸ್ತುತವಾಗಿ ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದ ಸನ್ನಿವೇಶಗಳ ಹಿನ್ನೆಲೆಯಲ್ಲಿ ಅಡುಗೆ ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂಬ ವದಂತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. ಈ ಕುರಿತು ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ.

ದೇಶಾದ್ಯಂತ ಎಲ್.ಪಿ.ಜಿ ಉತ್ಪಾದನೆ ಮತ್ತು ಪ್ರಕ್ರಿಯೆ ಉತ್ತಮವಾಗಿದ್ದು, ಸಾಕಷ್ಟು ಪ್ರಮಾಣದ ದಾಸ್ತಾನು ಲಭ್ಯವಿದೆ. ಆದರೆ ಹೆಚ್ಚಿನ ಗ್ರಾಹಕರು ಏಕಕಾಲದಲ್ಲಿ ಬುಕ್ಕಿಂಗ್ ಮಾಡುತ್ತಿರುವುದರಿಂದ ಸರ್ವರ್ ಮೇಲೆ ಒತ್ತಡ ಉಂಟಾಗಿ ತಾಂತ್ರಿಕ ಸಮಸ್ಯೆಗಳು ಕಾಣಿಸಿಕೊಳ್ಳುತ್ತಿದೆ ಎಂದು ತಿಳಿಸಿದರು.

ಗ್ರಾಹಕರು ಪ್ರತಿ ಸಿಲಿಂಡರ್ ಪಡೆದ ನಂತರ ಮತ್ತೊಂದು ಸಿಲಿಂಡರ್ ಬುಕ್ ಮಾಡಲು ೨೫ ದಿನಗಳ ಕಾಲಾವಕಾಶವಿರುತ್ತದೆ.  ಯಾವುದೇ ದೂರು ಅಥವಾ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಸಾರ್ವಜನಿಕರು ಆಹಾರ ನಿರೀಕ್ಷಕರನ್ನು ಸಂಪರ್ಕಿಸಬಹುದೆಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಗೃಹಬಳಕೆಯ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುವುದು ಅಥವಾ ಅನಧಿಕೃತವಾಗಿ ಸಂಗ್ರಹಿಸುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಇಂತಹ ಪ್ರಕರಣಗಳು ಕಂಡುಬಂದಲ್ಲಿ  ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

***************

ವಿಜಯಪುರ ಜಿಲ್ಲೆಯ ತಿಕೋಟಾ, ಬಬಲೇಶ್ವರ ಹಾಗೂ ವಿಜಯಪುರ ತಾಲೂಕುಗಳ ವಿವಿಧ ಗ್ರಾಮಗಳ ರಸ್ತೆ ಕಾಮಗಾರಿ ಹಾಗೂ ಬ್ರಿಡ್ಜ್  ಕಾಮಗಾರಿಗಳನ್ನು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ ಪರಿಶೀಲಿಸಿದರು.

ತಿಕೋಟಾ ತಾಲೂಕಿನ ಹರನಾಳ ಗ್ರಾಮದ ಪೂರ್ಣಗೊಂಡಿರುವ ಡೋಣಿ ನದಿಯ ಹೂಳು ತೆಗೆಯುವ ಕಾಮಗಾರಿಯ ಪರಿಶೀಲನೆ ನಡೆಸಿದರು.

ಬಳಿಕ ಬಬಲೇಶ್ವರ ತಾಲೂಕಿನ ಸಾರವಾಡ ಹಾಗೂ ಹೊನಗನಹಳ್ಳಿ ಗ್ರಾಮದ ವ್ಯಾಪ್ತಿಯ ಸೇತುವೆ, ವಿಜಯಪುರ ತಾಲೂಕು ವ್ಯಾಪ್ತಿಯ ಹಿಟ್ಟಿನಹಳ್ಳಿ ಗ್ರಾಮದ ಹತ್ತಿರ ಇರುವ ಸೇತುವೆಗಳ ಹೂಳು ತೆಗೆಯುವ ಕಾಮಗಾರಿಗಳನ್ನು ಪರಿಶೀಲಿಸಿದರು.

***************

ಪ್ರಸಿದ್ಧ ಪ್ರವಾಸಿ ತಾಣ ಹಾಗೂ ಧಾರ್ಮಿಕ ಸ್ಥಳವಾದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನಲ್ಲಿ ಹಿಮವದ್ ಗೋಪಾಲಸ್ವಾಮಿ ಬ್ರಹ್ಮ ರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಗೋಪಾಲಸ್ವಾಮಿ ಉತ್ಸವ ಮೂರ್ತಿಯನ್ನು ಫಲ ಪುಷ್ಪಗಳಿಂದ ಅಲಂಕೃತಗೊಂಡಿದ್ದ ರಥದಲ್ಲಿ ಇರಿಸಿ ಪೂಜೆ ಸಲ್ಲಿಸಿ, ಮಹಾ ಮಂಗಳಾರತಿಯನ್ನು ದೇವಾಲಯದ ಪ್ರಧಾನ ಅರ್ಚಕ ಗೋಪಾಲಕೃಷ್ಣ ಭಟ್ ನೆರವೇರಿಸಿದರು. ಪ್ರತಿ ವರ್ಷದಂತೆ ಅರಣ್ಯದಿಂದ ತಂದಿದ್ದ ಹಂಬಿನಿಂದ ತೇರನ್ನು ಸಹಸ್ರಾರು ಭಕ್ತರು ಜಯಘೋಷದಿಂದ ಎಳೆದರು.

***************

ಹೆಚ್.ಎನ್ ವ್ಯಾಲಿ ಮತ್ತು ಕೆ.ಸಿ.ವ್ಯಾಲಿ ನೀರನ್ನು ಮೂರನೇ ಹಂತದ ಶುದ್ಧೀಕರಣ ಮಾಡಬೇಕು, ನಂತರ ಕೆರೆಗಳಿಗೆ ಹರಿಸಬೇಕು ಎಂದು ಆಗ್ರಹಿಸಿ ಇಂದು ವಿವಿಧ ಕನ್ನಡಪರ, ರೈತಪರ ಮತ್ತು ದಲಿತಪರ ಸಂಘಟನೆಗಳು ಚಿಕ್ಕಬಳ್ಳಾಪುರ ನಗರದ ಬಂದ್‌ಗೆ ಕರೆ ನೀಡಿದ್ದು, ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಬಂದ್ ಅಂಗವಾಗಿ ಚಿಕ್ಕಬಳ್ಳಾಪುರ ನಗರದಲ್ಲಿ ಬೆಳಗ್ಗೆಯಿಂದಲೇ ಹೋಟೆಲ್, ಅಂಗಡಿ ಮುಂಗಟ್ಟುಗಳನ್ನು ಸ್ವಯಂಪ್ರೇರಿತವಾಗಿ ಮುಚ್ಚಲಾಗಿತ್ತು. ಸಾರಿಗೆ ಸಂಸ್ಥೆ ಬಸ್ ಗಳ ಸಂಚಾರ ವಿರಳವಾಗಿತ್ತು. ಸರ್ಕಾರಿ ಮತ್ತು ಖಾಸಗಿ ಬಸ್ ನಿಲ್ದಾಣಗಳು ಪ್ರಯಾಣಿಕರು ಮತ್ತು ಬಸ್‌ಗಳಿಲ್ಲದಿದ್ದ ದೃಶ್ಯಗಳು ಸಾಮಾನ್ಯವಾಗಿ ಕಂಡು ಬಂದವು.

***************

ಕೇಂದ್ರ ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ, ಬೆಂಗಳೂರಿನ ಪ್ರಾದೇಶಿಕ ಕಚೇರಿಯ ರಾಷ್ಟ್ರೀಯ ಅಂಕಿಅಂಶ ಕಚೇರಿ ಮೂಲಕ ಸಂಘಟಿತ ಸೇವಾ ವಲಯದ ಉದ್ಯಮಗಳ ವಾರ್ಷಿಕ ಸಮೀಕ್ಷೆ ೨೦೨೮ ಎಂಬ ರಾಷ್ಟ್ರೀಯ ಅಂಕಿಅಂಶ ಉಪಕ್ರಮವನ್ನು ಪ್ರಾರಂಭಿಸುತ್ತಿದ್ದು, ನಾಳೆ ಬೆಂಗಳೂರಿನ ಕೋರಮಂಗಲದ ಕೇಂದ್ರೀಯ ಸದನದಲ್ಲಿರುವ ಶ್ರುತಿ ಸಭಾಂಗಣದಲ್ಲಿ ಪ್ರಾದೇಶಿಕ ತರಬೇತಿ ಶಿಬಿರ ಆಯೋಜಿಸಲಾಗಿದೆ.

***************

ಇನ್ನು ಹವಾವರ್ತಮಾನ,

ರಾಜ್ಯದ ಕರಾವಳಿ ಹಾಗೂ ಉತ್ತರ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ. ದಕ್ಷಿಣ ಒಳನಾಡಿನಲ್ಲಿ ಒಣಹವೆಯಿತ್ತು.

ಕಲಬುರಗಿಯಲ್ಲಿ ಗರಿಷ್ಠ ೩೮.೭ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಧಾರವಾಡದಲ್ಲಿ ಕನಿಷ್ಠ ೧೮.೮ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

ಮುಂದಿನ ೫ ದಿನಗಳಲ್ಲಿ ರಾಜ್ಯಾದ್ಯಂತ ಗರಿಷ್ಠ ಮತ್ತು ಕನಿಷ್ಠ ತಾಪಮಾನಗಳಲ್ಲಿ ದೊಡ್ಡ ಬದಲಾವಣೆಗಳಿರುವುದಿಲ್ಲ.

*******ಮುಕ್ತಾಯ********